All India Radio: Bangalore
National Bulletin In Kannada
26.10.2025 7.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
26.10.2025 7.35 a.m.
<><><><>
ಮುಖ್ಯಾಂಶಗಳು

೧. ೧೨೭ ನೇ ಆವೃತ್ತಿಯ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿಂದು ಪ್ರಧಾನಿ ನರೇಂದ್ರ ಮೋದಿ ದೇಶ-ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ಭಾಷಣ

೨. ೨೨ನೇ ಆಸಿಯಾನ್-ಭಾರತ ಶೃಂಗಸಭೆಯಲ್ಲಿ ಇಂದು ವರ್ಚುವಲ್ ಮೂಲಕ ಪ್ರಧಾನಿ ಭಾಗಿ

೩. ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಸೀಶೆಲ್ಸ್ ಪ್ರವಾಸ; ಚುನಾಯಿತ ಅಧ್ಯಕ್ಷ ಡಾ. ಪ್ಯಾಟ್ರಿಕ್ ಹರ್ಮೈನಿ ಪ್ರಮಾಣವಚನ ಸಮಾರಂಭದಲ್ಲಿ ಭಾಗಿ

೪. ೧೭-೧೫ ವರ್ಷದೊಳಗಿನವರ ಬ್ಯಾಡ್ಮಿಂಟನ್ ಏಷ್ಯಾ ಚಾಂಪಿಯನ್‌ಶಿಪ್; ಭಾರತಕ್ಕೆ ಕನಿಷ್ಠ ಒಂದು ಚಿನ್ನದ ಪದಕ ಖಚಿತ

><><><><><

ಆಕಾಶವಾಣಿ ಪ್ರಸ್ತುತಪಡಿಸುವ ಜನಪ್ರಿಯ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿಂದು ಪ್ರಧಾನಿ ನರೇಂದ್ರ ಮೋದಿ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಸಮುದಾಯದೊಂದಿಗೆ ಮನದಮಾತು ಹಂಚಿಕೊಳ್ಳಲಿದ್ದಾರೆ. ಇದು ಮಾಸಿಕ ರೇಡಿಯೋ ಕಾರ್ಯಕ್ರಮದ ೧೨೭ನೇ ಸಂಚಿಕೆಯಾಗಲಿದೆ. ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಕಾರ್ಯಕ್ರಮ ಬೆಳಿಗ್ಗೆ ೧೧ ಗಂಟೆಗೆ ಬಿತ್ತರಗೊಳ್ಳಲಿದೆ. ಅಲ್ಲದೆ ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿ ನೇರ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲೂ ಆಕಾಶವಾಣಿ ಈ ಕಾರ್ಯಕ್ರಮವನ್ನು ಪ್ರಸಾರ ಮಾಡಲಿದೆ.

><><><><><

ಪ್ರಧಾನಿ ನರೇಂದ್ರ ಮೋದಿ ಇಂದು ೨೨ನೇ ಆಸಿಯಾನ್ - ಭಾರತ ಶೃಂಗಸಭೆಯಲ್ಲಿ ವರ್ಚುವಲ್ ಮೂಲಕ ಭಾಗವಹಿಸಲಿದ್ದಾರೆ. ಪ್ರಧಾನಿ ಮತ್ತು ಆಸಿಯಾನ್ ನಾಯಕರು ಜಂಟಿಯಾಗಿ ಆಸಿಯಾನ್-ಭಾರತ ಸಂಬಂಧಗಳಲ್ಲಿನ ಪ್ರಗತಿಯನ್ನು ಪರಿಶೀಲಿಸಲಿದ್ದಾರೆ ಮತ್ತು ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಬಲಪಡಿಸುವ ಉಪಕ್ರಮಗಳ

ಕುರಿತು ಚರ್ಚಿಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಆಸಿಯಾನ್ ಜೊತೆಗಿನ ಸಂಬಂಧವನ್ನು ಬಲಪಡಿಸುವುದು ಭಾರತದ ಆಕ್ಟ್-ಈಸ್ಟ್ ನೀತಿ ಮತ್ತು ಇಂಡೋ-ಪೆಸಿಫಿಕ್ ದೃಷ್ಟಿಕೋನದ ಪ್ರಮುಖ ಆಧಾರಸ್ತಂಭವಾಗಿದೆ ಎಂದು ಸಚಿವಾಲಯ ತಿಳಿಸಿದೆ. ಇದೇ ೨೭ ರಂದು ಕೌಲಾಲಂಪುರದಲ್ಲಿ ನಡೆಯಲಿರುವ ೨೦ನೇ ಪೂರ್ವ ಏಷ್ಯಾ ಶೃಂಗಸಭೆಯಲ್ಲಿ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಭಾರತವನ್ನು ಪ್ರತಿನಿಧಿಸಲಿದ್ದಾರೆ. ಪೂರ್ವ-ಏಷ್ಯಾ ಶೃಂಗಸಭೆಯು ಇಂಡೋ-ಪೆಸಿಫಿಕ್ ಪ್ರದೇಶದಲ್ಲಿ ಶಾಂತಿ, ಸ್ಥಿರತೆ ಮತ್ತು ಸಮೃದ್ಧಿಗೆ ಇರುವ ಸವಾಲುಗಳ ಕುರಿತು ಚರ್ಚಿಸಲು ಹಾಗೂ ಪ್ರಾದೇಶಿಕ ಮತ್ತು ಅಂತಾರಾಷ್ಟ್ರೀಯ ಬೆಳವಣಿಗೆಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲು ಅವಕಾಶವನ್ನು ಒದಗಿಸುತ್ತದೆ.

><><><><

ಛತ್ ಪೂಜೆಯ ಎರಡನೇ ದಿನವಾದ ಇಂದು ಈ ದಿನವನ್ನು ಖರ್ಣ ಎಂದು ಕರೆಯಲಾಗುತ್ತದೆ. ಈ ದಿನದಂದು ಭಕ್ತರು ಸೂರ್ಯೋದಯದಿಂದ ಸೂರ್ಯಾಸ್ತದವರೆಗೆ ಉಪವಾಸ ಮಾಡುತ್ತಾರೆ, ಆಹಾರ ಮತ್ತು ನೀರು ಎರಡನ್ನೂ ತ್ಯಜಿಸುತ್ತಾರೆ. ಸೂರ್ಯಾಸ್ತದ ಸಮಯದಲ್ಲಿ ಸೂರ್ಯ ದೇವರಿಗೆ ನೈವೇದ್ಯಗಳನ್ನು ಅರ್ಪಿಸಿದ ನಂತರವೇ ಉಪವಾಸವನ್ನು ಮುರಿಯಲಾಗುತ್ತದೆ. ನಾಲ್ಕು ದಿನಗಳ ಕಾಲ ನಡೆಯುವ ಛತ್ ಪೂಜೆಯು ನಿನ್ನೆ ನಹಯ್-ಖಯ್ ನೊಂದಿಗೆ ಪ್ರಾರಂಭವಾಯಿತು. ಸೂರ್ಯ ದೇವರು ಮತ್ತು ಅವನ ಸಹೋದರಿ ಛಠಿ ಮಾತೆಗೆ ಪೂಜೆಗೆ ಸಮರ್ಪಿತವಾದ ಈ ಹಬ್ಬವು ಪಾವಿತ್ರ್ಯತೆ, ಕೃತಜ್ಞತೆ ಮತ್ತು ಕುಟುಂಬದ ಯೋಗಕ್ಷೇಮದ ಪ್ರಕೀತವಾಗಿದೆ.. ಛಠ್ ಹಬ್ಬದ ಸಂದರ್ಭದಲ್ಲಿ ದೇಶಾದ್ಯಂತ ಮತ್ತು ಪ್ರಪಂಚದಾದ್ಯಂತದ ಭಕ್ತರಿಗೆ ಪ್ರಧಾನಿ ನರೇಂದ್ರ ಮೋದಿ ಶುಭಾಶಯಗಳನ್ನು ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಎಲ್ಲಾ ವ್ರತಸ್ಥರ ಅಚಲ ಭಕ್ತಿಗೆ ಗೌರವ ಸಲ್ಲಿಸಿದರು ಮತ್ತು ಈ ನಾಲ್ಕು ದಿನಗಳ ಹಬ್ಬದ ಆಳವಾದ ಸಾಂಸ್ಕೃತಿಕ ಮಹತ್ವದ ಕುರಿತು ತಿಳಿಸಿದರು..

><><><><

ಸೀಶೆಲ್ಸ್‌ನ ಚುನಾಯಿತ ಅಧ್ಯಕ್ಷ ಡಾ. ಪ್ಯಾಟ್ರಿಕ್ ಹರ್ಮೈನಿ ಅವರ ಪ್ರಮಾಣವಚನ ಸಮಾರಂಭದಲ್ಲಿ ಭಾಗವಹಿಸಲು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಇಂದು ಸೀಶೆಲ್ಸ್‌ಗೆ ಎರಡು ದಿನಗಳಿಗಾಗಿ ಭೇಟಿ ನೀಡಲಿದ್ದಾರೆ. ಈ ಭೇಟಿಯ ಸಮಯದಲ್ಲಿ ಉಪರಾಷ್ಟ್ರಪತಿಗಳು, ಡಾ. ಹರ್ಮೈನಿ ಅವರಿಗೆ ಅಭಿನಂದನೆ ತಿಳಿಸುವ ಜೊತೆಗೆ ಎರಡೂ ದೇಶಗಳ ನಡುವಿನ ನಿಕಟ, ದೀರ್ಘಕಾಲೀನ ಸಂಬಂಧಗಳನ್ನು ಪುನರುಚ್ಚರಿಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಭಾರತದ ವಿಷನ್ ಮಹಾಸಾಗರದ ಅಡಿಯಲ್ಲಿ ಸೀಶೆಲ್ಸ್ ಪ್ರಮುಖ ಪಾಲುದಾರ ರಾಷ್ಟ್ರವಾಗಿದೆ. ಈ ಭೇಟಿಯು ಸೀಶೆಲ್ಸ್‌ನೊಂದಿಗಿನ ತನ್ನ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸಲು ಮತ್ತು ವಿಸ್ತರಿಸಲು ಭಾರತದ ಆಳವಾದ ಬದ್ಧತೆಯನ್ನು ಒತ್ತಿ ಹೇಳುತ್ತದೆ.

><><><><

ಈ ಹಬ್ಬದ ಋತುವಿನಲ್ಲಿ ಇಲ್ಲಿಯವರೆಗೆ ೧.೫ ಕೋಟಿಗೂ ಹೆಚ್ಚು ಪ್ರಯಾಣಿಕರು ಸಂಚರಿಸಿದ್ದಾರೆ. ಹಬ್ಬದ ಅವಧಿಯ ಅಂತ್ಯದ ವೇಳೆಗೆ ಈ ಸಂಖ್ಯೆ ೨.೫ ಕೋಟಿ ಮೀರುವ ನಿರೀಕ್ಷೆಯಿದೆ ಎಂದು ರೈಲ್ವೆ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಬಿಹಾರ ಮತ್ತು ಉತ್ತರ ಪ್ರದೇಶದ ಹತ್ತಿರದ ಪ್ರದೇಶಗಳಲ್ಲಿನ ಮೂವತ್ತು ಪ್ರಮುಖ ನಿಲ್ದಾಣಗಳು ಸುಗಮ ಜನಸಂದಣಿ ನಿರ್ವಹಣೆಯನ್ನು ಖಚಿತಪಡಿಸಿಕೊಳ್ಳಲು ದೊಡ್ಡ ಹಿಡುವಳಿ ಪ್ರದೇಶಗಳನ್ನು ಹೊಂದಿವೆ. ಇತ್ತೀಚಿನ ವರ್ಷಗಳಲ್ಲಿ ರೈಲ್ವೆ ಮೂಲಸೌಕರ್ಯದಲ್ಲಿ ಹೆಚ್ಚಿನ ಹೂಡಿಕೆಯು ಗಮನಾರ್ಹ ಪ್ರಗತಿಗೆ ಕಾರಣವಾಗಿದೆ ಎಂದು ಸಚಿವಾಲಯ ಹೇಳಿದೆ. ಈ ಹಿಂದೆ ಕೇವಲ ನೂರು ಇದ್ದ ವಿಶೇಷ ರೈಲುಗಳ ಸಂಖ್ಯೆ ಈಗ ದಾಖಲೆಯ ಸಂಖ್ಯೆಗೆ ಏರಿದೆ. ಹಳಿ ನಿರ್ಮಾಣವೂ ಗಮನಾರ್ಹವಾಗಿ ಹೆಚ್ಚಾಗಿದೆ, ಸುಮಾರು ಒಂದು ದಶಕದ ಹಿಂದೆ ವರ್ಷಕ್ಕೆ ಕೇವಲ ೪೦೦ ರಿಂದ ೬೦೦ ಕಿಲೋಮೀಟರ್‌ಗೆ ತಲುಪಿದ್ದ ವಿಶೇಷ ರೈಲುಗಳ ಸಂಖ್ಯೆ ಇಂದು ವರ್ಷಕ್ಕೆ ೪,೦೦೦ ಕಿಲೋಮೀಟರ್‌ಗೆ ತಲುಪಿದೆ.

><><><><

ರಾಮನಾಥಪುರಂ, ಶಿವಗಂಗಾ, ತೂತುಕುಡಿ ಮತ್ತು ವಿರುಧುನಗರ ಜಿಲ್ಲೆಗಳನ್ನು ಪ್ರಧಾನಮಂತ್ರಿ ಧನ್‌ಧಾನ್ಯ ಕೃಷಿ ಯೋಜನೆಯಡಿ ಸೇರಿಸಲಾಗಿದೆ ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ. ವೆಲ್ಲೂರಿನಲ್ಲಿ ರೈತರೊಂದಿಗೆ ಸಂವಾದ ನಡೆಸಿದ ಅವರು, ಈ ಯೋಜನೆಯಡಿಯಲ್ಲಿ ರೈತರಿಗೆ ಸಮಗ್ರ ಪ್ರಯೋಜನಗಳನ್ನು ನೀಡಲು ೩೬ ಯೋಜನೆಗಳನ್ನು ಸಂಯೋಜಿಸಲಾಗುತ್ತಿದೆ ಎಂದು ಹೇಳಿದರು. ನಾಲ್ಕು ಕೃಷಿ ವಿಜ್ಞಾನ ಕೇಂದ್ರಗಳ ಮುಖ್ಯಸ್ಥರೊಂದಿಗೆ ಯೋಜನೆಯ ಪ್ರಗತಿ ಪರಿಶೀಲನೆ ನಡೆಸಿದ ಅವರು, ದೇಶವನ್ನು ದ್ವಿದಳ ಧಾನ್ಯಗಳ ಉತ್ಪಾದನೆಯಲ್ಲಿ ಸ್ವಾವಲಂಬಿಯನ್ನಾಗಿ ಮಾಡುವ ಪ್ರಧಾನಿ ನರೇಂದ್ರ ಮೋದಿಯವರ ದೃಷ್ಟಿಕೋನವನ್ನು ವಿವರಿಸುವ ನೈಸರ್ಗಿಕ ಕೃಷಿ ಪದ್ಧತಿಗಳು ಮತ್ತು ರಾಷ್ಟ್ರೀಯ ದ್ವಿದಳ ಧಾನ್ಯಗಳ ಮಿಷನ್ ಬಗ್ಗೆ ಅವರು ಒತ್ತು ಹೇಳಿದರು. ಸುಧಾರಿತ ಪ್ರಭೇದಗಳು, ಸುಧಾರಿತ ತಂತ್ರಜ್ಞಾನ ಮತ್ತು ಖಚಿತವಾದ ಮಾರುಕಟ್ಟೆ ಮೂಲಕ ತಮಿಳುನಾಡು ಮುಂತಾದ ರಾಜ್ಯಗಳು ಹೆಚ್ಚಿನ ಪ್ರಯೋಜನ ಪಡೆಯುತ್ತವೆ ಎಂದು ತಿಳಿಸಿದರು.

ಧ್ವನಿ : ಶಿವರಾಜ್ ಸಿಂಗ್ದ ಚೌಹಾಣ್ (೨೬ ಸೆಕೆಂಡ್ಸ್)

><><><><

ಕೇಂದ್ರ ನಾಗರಿಕ ವಿಮಾನಯಾನ ಸಚಿವ ರಾಮ್ ಮೋಹನ್ ನಾಯ್ಡು ಅವರು ದೆಹಲಿಯ ಇಂದಿರಾ ಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಟರ್ಮಿನಲ್-೨ ಅನ್ನು ನಿನ್ನೆ ಉದ್ಘಾಟಿಸಿದರು. ಟರ್ಮಿನಲ್-೨ ಇಂದಿಯಿಂದ ಪ್ರಯಾಣಿಕರ ಸೇವೆಗಾಗಿ ಮತ್ತೆ ತೆರೆಯಲಿದೆ. ಐದು ತಿಂಗಳ ಅಂತರದ ನಂತರ ನವೀಕರಿಸಿದ ಟರ್ಮಿನಲ್ ಅನ್ನು

ತೆರೆಯಲಾಗುತ್ತಿದೆ. ಉದ್ಘಾಟನೆ ನೆರವೇರಿಸಿ ಮಾತನಾಡಿದ ಸಚಿವರು, ವಾಯುಯಾನ ವಲಯ ನಿರಂತರವಾಗಿ ವಿಕಸನಗೊಳ್ಳುತ್ತಿದೆ ಮತ್ತು ಹೆಚ್ಚು ಹೆಚ್ಚು ಜನರು ವಿಮಾನದಲ್ಲಿ ಪ್ರಯಾಣಿಸುವಂತೆ ಸಚಿವಾಲಯ ಶ್ರಮಿಸುತ್ತಿದೆ ಎಂದು ಹೇಳಿದರು.

ಅತ್ಯಾಧುನಿಕ ಸೌಲಭ್ಯಗಳೊಂದಿಗೆ ನವೀಕರಿಸಿದ ಈ ಟರ್ಮಿನಲ್‌ನಿಂದ ಪ್ರಯಾಣಿಕರಿಗೆ ಅನುಕೂಲವಾಗಲಿದೆ ಹಾಗೂ ವಿದ್ಯಾರ್ಥಿಗಳಿಗೆ ಸುಲಭ ಮತ್ತು ಆರಾಮದಾಯಕ ಪ್ರಯಾಣವನ್ನು ಒದಗಿಸಲಿದೆ ಎಂದು ಅವರು ತಿಳಿಸಿದರು.

><><><><

ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು ಮತ್ತು ಸೌರಾ? ಹಾಗೂ ಕಚ್‌ನ ಪ್ರತ್ಯೇಕ ಸ್ಥಳಗಳಲ್ಲಿ ಇಂದು ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಆಂಧ್ರಪ್ರದೇಶ, ಗುಜರಾತ್ ಪ್ರದೇಶ, ಕೇರಳ, ಮಾಹೆ, ತಮಿಳುನಾಡು, ಪುದುಚೇರಿ, ಕಾರೈಕಲ್ ಮತ್ತು ಪಶ್ಚಿಮ ಮಧ್ಯಪ್ರದೇಶದ ಪ್ರತ್ಯೇಕ ಸ್ಥಳಗಳಲ್ಲಿಯೂ ಭಾರೀ ಮಳೆಯಾಗುವ ಸಾಧ್ಯತೆಯಿದೆ. ಛತ್ತೀಸ್‌ಗಢ, ಪೂರ್ವ ರಾಜಸ್ಥಾನ, ಗುಜರಾತ್ , ಕೊಂಕಣ ಮತ್ತು ಗೋವಾ, ಮಧ್ಯಪ್ರದೇಶ, ಮಹಾರಾ?, ತಮಿಳುನಾಡು, ಪುದುಚೇರಿ ಮತ್ತು ಕಾರೈಕಲ್‌ಗಳಲ್ಲಿ ಪ್ರತ್ಯೇಕ ಸ್ಥಳಗಳಲ್ಲಿ ಮಿಂಚು ಸಹಿತ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಆಗ್ನೇಯ ಬಂಗಾಳಕೊಲ್ಲಿಯಲ್ಲಿ ಉಂಟಾಗಿರುವ ವಾಯುಭಾರ ಕುಸಿತವು ನಾಳೆಯ ವೇಳೆಗೆ ನೈಋತ್ಯ ಮತ್ತು ಪಶ್ಚಿಮ-ಮಧ್ಯ ಬಂಗಾಳಕೊಲ್ಲಿಯಲ್ಲಿ ಚಂಡಮಾರುತವಾಗಿ ತೀವ್ರಗೊಳ್ಳುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಚಂಡಮಾರುತದ ಪ್ರಭಾವದಿಂದಾಗಿ ಮುಂದಿನ ಮೂರರಿಂದ ನಾಲ್ಕು ದಿನಗಳವರೆಗೆ ದೇಶದ ಮಧ್ಯ ಮತ್ತು ದಕ್ಷಿಣ ಭಾಗಗಳಲ್ಲಿ ಭಾರೀ ಮಳೆಯಾಗುವ ನಿರೀಕ್ಷೆಯಿದೆ ಎಂದು ಇಲಾಖೆ ತಿಳಿಸಿದೆ.

><><><><

ಭಾರತದ ಯುವ ಶಟ್ಲರ್‌ಗಳು ೧೭ ಮತ್ತು ೧೫ ವರ್ಷದೊಳಗಿನವರ ಬ್ಯಾಡ್ಮಿಂಟನ್ ಏಷ್ಯಾ ಚಾಂಪಿಯನ್‌ಶಿಪ್‌ಗಳಲ್ಲಿ ಅದ್ಭುತ ಪ್ರದರ್ಶನ ನೀಡುತ್ತಿದ್ದು, ಭಾರತಕ್ಕೆ ಕನಿಷ್ಠ ಒಂದು ಚಿನ್ನದ ಪದಕ ಖಚಿತಪಡಿಸಿದ್ದಾರೆ. ಬಾಲಕಿಯರ ೧೭ ವರ್ಷದೊಳಗಿನವರ ಸಿಂಗಲ್ಸ್ ವಿಭಾಗದಲ್ಲಿ, ದೀಕ್ಷಾ ಸುಧಾಕರ್ ಮತ್ತು ಲಕ್ಷ್ಯಾ ರಾಜೇಶ್ ತಮ್ಮ ಸೆಮಿಫೈನಲ್ ಪಂದ್ಯಗಳಲ್ಲಿ ನೇರ ಸೆಟ್‌ಗಳಲ್ಲಿ ಗೆದ್ದ ನಂತರ ಫೈನಲ್‌ಗೆ ಮುನ್ನಡೆದರು. ಆ ಮೂಲಕ ವೈಯಕ್ತಿಕ ವಿಭಾಗದಲ್ಲಿ ಭಾರತ ಚಿನ್ನ ಮತ್ತು ಬೆಳ್ಳಿ ಎರಡೂ ಪದಕ ಗೆಲ್ಲುವುದನ್ನು ಖಚಿತಪಡಿಸಿದ್ದಾರೆ ಬಾಲಕಿಯರ ೧೫ ವರ್ಷದೊಳಗಿನವರ ಸ್ಪರ್ಧೆಯಲ್ಲಿ ಭಾರತದ ಶೈನಾ ಮಣಿಮುತ್ತು ಸೆಮಿಫೈನಲ್ ಗೆಲುವಿನ ನಂತರ ಫೈನಲ್ ತಲುಪಿದ್ದು, ಚಾಂಪಿಯನ್‌ಶಿಪ್ ಕಿರೀಟಕ್ಕಾಗಿ ಜಪಾನಿನ ಎದುರಾಳಿಯ ಸವಾಲನ್ನು ಎದುರಿಸಲಿದ್ದಾರೆ. ಈ ನಡುವೆ ೧೭ ವರ್ಷದೊಳಗಿನವರ ಬಾಲಕರ ಸಿಂಗಲ್ಸ್ ಮತ್ತು ಮಿಶ್ರ ಡಬಲ್ಸ್‌ನಲ್ಲಿ ಭಾರತದ ಶಟ್ಲರ್‌ಗಳು ಸೆಮಿಫೈನಲ್‌ನಲ್ಲಿ ಅಭಿಯಾನ ಕೊನೆಗೊಳಿಸಿದರು.

><><><><

ಸೆರ್ಬಿಯಾದಲ್ಲಿ ನಡೆದ ೨೩ ವರ್ಷದೊಳಗಿನವರ ವಿಶ್ವ ಕುಸ್ತಿ ಚಾಂಪಿಯನ್‌ಶಿಪ್‌ನಲ್ಲಿ ಭಾರತದ ಹನ್ಸಿಕಾ ಲಂಬಾ ಮತ್ತು ಸಾರಿಕಾ ಮಲಿಕ್ ಬೆಳ್ಳಿ ಪದಕ ಗೆದ್ದಿದ್ದಾರೆ. ಹನ್ಸಿಕಾ ಲಂಬಾ ೫೩ ಕೆಜಿ ಫೈನಲ್‌ನಲ್ಲಿ ಜಪಾನ್‌ನ ಹರುನಾ ಮೊರಿಕಾವಾ ವಿರುದ್ಧ ೦-೪ ಅಂಕಗಳಿಂದ ಸೋತರು. ೫೫ ಕೆಜಿ ವಿಭಾಗದ ಫೈನಲ್‌ನಲ್ಲಿ, ಸಾರಿಕಾ ಮಲಿಕ್, ಜಪಾನ್‌ನ ರುಕಾ ನಟಾಮಿಯನ್ನು ಎದುರಿಸಿ ೨-೧ ಅಂತರದಲ್ಲಿ ಪರಾಭವಗೊಂಡರು.

><><>END<><><